ಪ್ರಸ್ತಾವನೆ ಅಂಗೀಕಾರ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಸಹಕಾರಿ ಸಚಿವರು):- "1993ರ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ " 1993ರ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿಮಂಡಳಿ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

1993ರ ಕರ್ನಾಟಕ ತೆರಿಗೆ ಕಾನೂನುಗಳ(ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ(ಮುಖ್ಯಮಂತ್ರಿಯವರು):- ಮಾನ್ಯ ಅಧ್ಯಕ್ಷರೇ, 1993 ರ ಕರ್ನಾಟಕ ತೆರಿಗೆ ಕಾನೂನುಗಳು(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ '1993ರ ಕರ್ನಾಟಕ ತೆರಿಗೆ ಕಾನೂನುಗಳ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು'.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, 1993ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು:- ವಿಧೇಯಕವನ್ನು ಮಂಡಿಲಾಗಿದೆ.

1993ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ(ಮುಖ್ಯ ಮಂತ್ರಿಗಳು):- ಮಾನ್ಯಅಧ್ಯಕ್ಷರೇ, 1993ರ ಕರ್ನಾಟಕ ತೆರಿಗೆ ಕಾನೂನುಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ:- ಇದರಲ್ಲಿ ಹೇಳುವುದು ಏನೂ ಇಲ್ಲ. ಬಡ್ಜೆಟ್‌ನಲ್ಲಿ ಎಲ್ಲಾ ಇದೆ.

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ "1993ರ ಕರ್ನಾಟಕ ತೆರಿಗೆ ಕಾನೂನುಗಳು(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಅನುಬಂಧ

ಖಂಡ 2 ರಿಂದ 5 ರವರೆಗೆ:-

ಉಪಾಧ್ಯಕ್ಷರು:- "ಖಂಡ 2 ರಿಂದ 5 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 5 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ :-

ಉಪಾಧ್ಯಕ್ಷರು:-ಪ್ರಸ್ತಾವ ಏನೆಂದರೆ, "ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ(ಮಾನ್ಯ ಮುಖ್ಯ ಮಂತ್ರಿಗಳು):- ಮಾನ್ಯ ಉಪ ಸಭಾಪತಿಯವರೆ,

"1993 ರ ಕರ್ನಾಟಕ ತೆರಿಗೆ ಕಾನೂನುಗಳ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ "1993 ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ದೊರೆಯಿತು.

ಅಧ್ಯಕ್ಷರ ಅಪ್ಪಣೆ ಕೋರಿ ಪ್ರಸ್ತಾಪಿಸಲಾದ ವಿಷಯ

ವಿಷಯ:- ಮೈಸೂರು ನಗರದಲ್ಲಿ ಸ್ಫೋಟದಿಂದ ಭಯದ ವಾತಾವರಣ

ಶ್ರೀ ವಾಟಾಳ್ ನಾಗರಾಜ್:- ಮಾನ್ಯ ಅಧ್ಯಕ್ಷರೇ, ಇವತ್ತು ಬೆಳಿಗ್ಗೆ ಮಾನ್ಯಮುಖ್ಯ ಮಂತ್ರಿಗಳ ಗೈರುಹಾಜರಿಯಲ್ಲಿ ಕೆಲವು ವಿಷಯಗಳನ್ನು ಸಭೆಯ ಗಮನಕ್ಕೆ ತಂದೆವು. ಮೊದಲನೆಯದು ಎಂದರೆ, ಮೈಸೂರಿನಲ್ಲಿ ಭೂ ಕಂಪವಾಗಿ ಭೂಮಿ ಸ್ವಲ್ಪ ಮಟ್ಟಿಗೆ ನಡುಗಿ ಜನರು ಭಯಭೀತರಾಗಿದ್ದಾರೆಂದು ಬಂದಿದೆ. ಇದರ ಬಗ್ಗೆ ಸರ್ಕಾರಕ್ಕೆ ಏನು ಮಾಹಿತಿ ಇದೆ? ಸರ್ಕಾರ ಏನು ಜವಾಬ್ದಾರಿಯುತ ಕ್ರಮವನ್ನು ತಗೆದುಕೊಂಡಿದೆ ಎಂಬ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಒಂದು ಹೇಳಿಕೆಯನ್ನು ಮಾಡಬೇಕೆಂದು ಹೇಳಿದ್ದೆವು. ಇತ್ತೀಚಿಗೆ ಈ ರಾಜ್ಯದಲ್ಲಿ ಬಾಂಬ್ ಗದ್ದಲ ಎಲ್ಲಾ ಕಡೆಯಲ್ಲೂ ನಡೆದಿದೆ. ಈ ಸದನಕ್ಕೂ ಕೂಡ ಬಾಂಬ್ ಇಡುತ್ತೇವೆಂದು ಒಂದು ಬೆದರಿಕೆಯೂ ಬಂದಿತ್ತು. ಈ ಬೆದರಿಕೆಯ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವ ರೀತಿಯ ಮಾಹಿತಿ ಇದೆ? ಏಕೆಂದರೆ ಈ ಶಾಸನಸಭೆಯ ಸದನಕ್ಕೆ ಬಾಂಬ್ ಇಡುತ್ತೇವೆಂದು ಹೇಳಿರುವಂಥ ಮಾತುಗಳು ಅನೇಕ ಕಡೆಯಿಂದ ಬಂದಿರತಕ್ಕ ಭಯೋತ್ಪಾದನೆ, ಫೋನ್ ಕರೆಗಳು ಬಂದಿವೆ. ಆವತ್ತು ಶಾಸನಸಭೆಯನ್ನು ಮುಂದೂಡಿ ಹೊರಗಡೆ ತನಿಖೆ ನಡೆಸಿ ಆಗಬಾರದ ಒಂದು ದೊಡ್ಡ ಗೊಂದಲ ನಡೆಯಿತು. ಅದರ ಬಗ್ಗೆ ಸರ್ಕಾರಕ್ಕೆ